ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

8

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭಾ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 23/7/2020

# 45 ರಾಜ್ಯಸಭಾ ಸದಸ್ಯರ ಪ್ರಮಾಣ

ವಿಶ್ವವಾಣಿ 23-7-20

ದೆಹಲಿ: ರಾಜ್ಯಸಭೆಗೆ ಚುನಾಯಿತರಾದ 61 ಸದಸ್ಯರ ಪೈಕಿ 45 ಸದಸ್ಯರು ಬುಧವಾರ ಪ್ರಮಾಣವಚನ ಸ್ವೀಕರಿಸಿದರು. ನೂತನ ಸದಸ್ಯರಿಗೆ ರಾಜ್ಯಸಭೆ ಸಭಾಧ್ಯಕ್ಷ, ಉಪ ರಾಷ್ಟ್ರಪತಿ ಎಂ.ವೆಂಕಯ್ಯ ನಾಯ್ಡು ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಪ್ರಮುಖವಾಗಿ ಕರ್ನಾಟಕದ ಮಲ್ಲಿಕಾರ್ಜುನ ಖರ್ಗೆ, ಅಶೋಕ್ ಗಸ್ತಿ ಮತ್ತು ಈರಣ್ಣ ಕಡಾಡಿ, ಜ್ಯೋತಿರಾದಿತ್ಯ ಸಿಂಧಿಯಾ, ಸುಮೇರ್ ಸಿಂಗ್ ಸೋಲಂಕಿ, ಕೆ.ಸಿ.ವೇಣುಗೋಪಾಲ್, ದೀಪೇಂದರ್ ಎಸ್.ಹೂಡಾ, ರಾಜೇಂದ್ರ ಗೆಹ್ಲೋಟ್ ಪ್ರಮಾಣ ವಚನ ಸ್ವೀಕರಿಸಿದರು. 45 ಸದಸ್ಯರ ಪೈಕಿ 36 ಸದಸ್ಯರು ರಾಜ್ಯಸಭೆಗೆ ಮೊದಲ ಬಾರಿಗೆ ಆಯ್ಕೆಯಾಗಿದ್ದಾರೆ.

ಕರೋನಾ ಹಿನ್ನೆಲೆಯಲ್ಲಿ ಇದೇ ಮೊದಲ ಬಾರಿಗೆ ಸಂಸತ್ತಿನ ರಾಜ್ಯಸಭಾಧ್ಯಕ್ಷರ ಕಚೇರಿಯಲ್ಲಿ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ನಡೆಯಿತು.

## ಕಡಾಡಿ ಕನ್ನಡದಲ್ಲಿ ಪ್ರಮಾಣ ವಚನ



ಕರ್ನಾಟಕದಿಂದ ಮೊದಲ ಬಾರಿಗೆ ರಾಜ್ಯಸಭೆಗೆ ಆಯ್ಕೆಯಾಗಿರುವ ಈರಣ್ಣ ಕಡಾಡಿ ಅವರು ಕನ್ನಡದಲ್ಲೇ ಪ್ರಮಾಣ ವಚನ ಸ್ವೀಕರಿಸಿದರು. 1967ರಲ್ಲಿ ಸಂಸತ್ತಿನಲ್ಲಿ ದಿ.ಜೆ.ಎಚ್.ಪಟೇಲರು ಕನ್ನಡದಲ್ಲಿಯೇ ಭಾಷಣ ಮಾಡಿದ ಮೊದಲ ಸಂಸದರಾಗಿದ್ದರು. ಕಡಾಡಿ ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದಕ್ಕೆ ನಾಡಿನಾದ್ಯಂತ ವಿವಿಧ ಕನ್ನಡಪರ ಸಂಘಟನೆಗಳಿಂದ ಮೆಚ್ಚುಗೆಗಳ ಮಹಾಪೂರವೇ ಹರಿದು ಬಂದಿದೆ.